**ಆಯುಕ್ತರು**

ಕಾರ್ಮಿಕ ಆಯುಕ್ತರ ಕಛೇರಿ

ಕರ್ನಾಟಕ ಸರ್ಕಾರ
ಕಾರ್ಮಿಕ ಇಲಾಖೆ

"ಕಾರ್ಮಿಕ ಭವನ", ಐಟಿಐ ಕಾಲೇಜ್ ಕಾಂಪೌಂಡ್
ಬನ್ನೇರುಘಟ್ಟ ರಸ್ತೆ, ಬೆಂಗಳೂರು - 560 029
ಕಛೇರಿ: 080 2975 3078
ಇಮೇಲ್ : labour.commissioner42@gmail.com


ಸಂಖ್ಯೆ : ಪಿ&ಎಸ್/ಎನ್ಎಫ್ಹೆಚ್/ಸಿಆರ್-2/2024-25 ದಿನಾಂಕ: 22-10-2024

# ಸುತ್ತೋಲೆ

ವಿಷಯ: Bye Elections to 83-Shiggaon, 95-Sandur and 185-Channaptna Assembly Constituencies, 2024-Grant of Paid Holiday to employees on the day of poll i.e., on 13-11-2024-reg

ಉಲ್ಲೇಖ: 1.Office of the Chief Electrol Officer, Karnataka letter No:DPAR 143 CHUVISA 2024 (P-1) Dated:18-10-2024

2.Election Commission Of India: Letter No:78/EPS/2024 Dated:16-10-2024

= = =

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಚುನಾವಣಾ ಆಯೋಗವು ಕರ್ನಾಟಕ ವಿಧಾನಸಭೆಯ 03 ಕ್ಷೇತ್ರಗಳಾದ 83-ಶಿಗ್ಗಾಂವ್, 95-ಸಂಡೂರು ಹಾಗೂ 185-ಚನ್ನಪಟ್ಟಣ ಈ ಕ್ಷೇತ್ರಗಳಿಗೆ ದಿನಾಂಕ:13-11-2024 (ಬುಧವಾರ) ರಂದು ಉಪಚುನಾವಣೆಯನ್ನು ಘೋಷಿಸಿದೆ.

ಮತದಾನ ನಡೆಯಲಿರುವ ಕ್ಷೇತ್ರಗಳ ವ್ಯಾಪ್ತಿಯಲ್ಲಿ ನೋಂದಾಯಿತರಾದ ಅರ್ಹ ಮತದಾರರಾಗಿರುವ ಎಲ್ಲಾ ಕಾರ್ಮಿಕರಿಗೆ ಮತ ಚಲಾಯಿಸಲು ಅನುಕೂಲವಾಗುವಂತೆ ಸಂಬಂಧಪಟ್ಟ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳು 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ರಜಾದಿನಗಳು) ಕಾಯ್ದೆಯ ಕಲಂ 3-ಎ ಪ್ರಕಾರ ಮತ ಚಲಾಯಿಸಲು ಅವಕಾಶ ಮಾಡಿ ಕೊಡಬೇಕಾಗುತ್ತದೆ. ಆದ್ದರಿಂದ **ಮತದಾನ ನಡೆಯಲಿರುವ ಕ್ಷೇತ್ರಗಳಲ್ಲಿ ಅರ್ಹರಿರುವ ಎಲ್ಲಾ ಕಾರ್ಮಿಕ ಮತದಾರರಿಗೆ ದಿನಾಂಕ 13-11-2024 (ಬುಧವಾರ) ರಂದು ವೇತನ ಸಹಿತ ರಜೆ ನೀಡಿ, ಎಲ್ಲಾ ಅರ್ಹ ಕಾರ್ಮಿಕರು ಸಂವಿಧಾನಾತ್ಮಕ/ಶಾಸನಾತ್ಮಕ ಹಕ್ಕಾದ ಮತವನ್ನು ಚಲಾಯಿಸಲು ಅನುವು ಮಾಡಿಕೊಡಲು ಸೂಚಿಸಿದೆ.**

ಈ ವಿಷಯದಲ್ಲಿ ಅರ್ಹ ಯಾವುದೇ ಕಾರ್ಮಿಕರಿಗೆ ಸಂವಿಧಾನಾತ್ಮಕ/ಶಾಸನಾತ್ಮಕ ಹಕ್ಕಾದ ಮತವನ್ನು ಚಲಾಯಿಸಲು ರಜೆ ನೀಡದೆ ಹಾಗೂ ಮತದಾನಕ್ಕೆ ಅವಕಾಶ ಮಾಡಿಕೊಡದಿದ್ದಲ್ಲಿ ಅಂತಹ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳ ವಿರುದ್ಧ 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ರಜಾ ದಿನಗಳು) ಕಾಯ್ದೆಯ ಕಲಂ 3-ಎ ರನ್ವಯ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದು.

ಕರ್ನಾಟಕ ವಿಧಾನಸಭೆ ಉಪ ಚುನಾವಣೆ-2024 ರ ಮತದಾನ ದಿನದಂದು ಚುನಾವಣೆ ನಡೆಯುವ ಕ್ಷೇತ್ರದ ವ್ಯಾಪ್ತಿಗೆ ಬರುವ ಎಲ್ಲಾ ಕಾರ್ಮಿಕರು, ಕಾರ್ಮಿಕ ಸಂಘಗಳು/ಮಾಲೀಕರ ಸಂಘಗಳ ಪ್ರತಿನಿಧಿಗಳ ಗಮನಕ್ಕೆ ತರಲು ಸಕಲ ಕ್ರಮಗಳನ್ನು ಕೈಗೊಳ್ಳಲು ಹಾಗೂ ಸರ್ಕಾರದ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಈ ಮೂಲಕ ಸಂಬಂಧಪಟ್ಟ ಅಧಿಕಾರಿಗಳು/ನಿರೀಕ್ಷಕರುಗಳಿಗೆ ಸೂಚಿಸಲಾಗಿದೆ.

ಆಯುಕ್ತರು
ಕಾರ್ಮಿಕ ಇಲಾಖೆ.

ಗೆ:

ಆಡಳಿತವರ್ಗ, ಎಲ್ಲಾ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳು

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ :

1. ಎಲ್ಲಾ ಉಪ ಕಾರ್ಮಿಕ ಆಯುಕ್ತರು.
2. ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತ: ತಮ್ಮ ಅಧೀನದಲ್ಲಿ ಬರುವ ಸಂಬಂಧಿಸಿದ ಕಾರ್ಮಿಕ ಅಧಿಕಾರಿಗಳು / ಹಿರಿಯ ಕಾರ್ಮಿಕ ನಿರೀಕ್ಷಕರು / ಕಾರ್ಮಿಕ ನಿರೀಕ್ಷಕರುಗಳಿಗೆ ಸೂಚಿಸುವುದು

**ಪ್ರತಿಯನ್ನು ಮಾಹಿತಿಗಾಗಿ :**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
2. ಮುಖ್ಯ ಚುನಾವಣಾಧಿಕಾರಿಗಳು, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು
5. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
6. ಅಪರ ಕಾರ್ಮಿಕ ಆಯುಕ್ತರು (ಆಡಳಿತ / ಕೈಗಾರಿಕಾ ಬಾಂದವ್ಯ), ಬೆಂಗಳೂರು
7. ಜಂಟಿ ಕಾರ್ಮಿಕ ಆಯುಕ್ತರು (ಕನಿಷ್ಠ ವೇತನ), ಬೆಂಗಳೂರು

ರವಾನೆ ಗುಮಾಸ್ತ
ಕಾರ್ಮಿಕ ಆಯುಕ್ತರವರ ಕಛೇರಿ
ಬೆಂಗಳೂರು - 560 029
ದಿನಾಂಕ 22/10/24

ಆಯುಕ್ತರು
...ರ್ಮಿಕ ಆಯುಕ್ತರ ಕಛೇರಿ

ಕರ್ನಾಟಕ ಸರ್ಕಾರ
ಕಾರ್ಮಿಕ ಇಲಾಖೆ

"ಕಾರ್ಮಿಕ ಭವನ", ಐಟಿಐ ಕಾಲೇಜ್ ಕಾಂಪೌಂಡ್
ಬನ್ನೇರುಘಟ್ಟ ರಸ್ತೆ, ಬೆಂಗಳೂರು - 560 029
ಕಛೇರಿ: 080 2975 3078
ಇಮೇಲ್ : labour.commissioner42@gmail.com

ಸಂಖ್ಯೆ : ಪಿ.ಎಸ್/ಎನ್ ಎಫ್ ಹೆಚ್/ಸಿಆರ್-2/2024-25

ದಿನಾಂಕ:22-10-2024

## ಪತ್ರಿಕಾ ಪ್ರಕಟಣೆ

ಭಾರತ ಚುನಾವಣಾ ಆಯೋಗವು ಕರ್ನಾಟಕ ವಿಧಾನಸಭೆ 03 ಕ್ಷೇತ್ರಗಳಾದ 83-ಶಿಗ್ಗಾಂವ್, 95-ಸಂಡೂರು ಹಾಗೂ 185-ಚನ್ನಪಟ್ಟಣ ಈ ಕ್ಷೇತ್ರಗಳಿಗೆ **ದಿನಾಂಕ :13-11-2024 (ಬುಧವಾರ)** ರಂದು ಉಪ ಚುನಾವಣೆ-2024 ಅನ್ನು ಘೋಷಿಸಿದ್ದು, ಮತದಾನ ನಡೆಯಲಿರುವ ಕ್ಷೇತ್ರಗಳ ವ್ಯಾಪ್ತಿಯಲ್ಲಿ ನೋಂದಾಯಿತರಾದ ಅರ್ಹ ಮತದಾರರಾಗಿರುವ ಎಲ್ಲಾ ಕಾರ್ಮಿಕರಿಗೆ ಮತ ಚಲಾಯಿಸಲು ಅನುಕೂಲವಾಗುವಂತೆ ಎಲ್ಲಾ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ರಜಾ ದಿನಗಳು) ಕಾಯ್ದೆಯ ಕಲಂ 3-ಎ ಹಾಗೂ 1951ರ ಪ್ರಜಾ ಪ್ರತಿನಿಧಿ ಕಾಯ್ದೆಯ ಕಲಂ.135(ಬಿ) ರಡಿಯಲ್ಲಿ ವೇತನ ಸಹಿತ ರಜೆ ಘೋಷಿಸಿ ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸುವುದಕ್ಕಾಗಿ ಎಲ್ಲಾ ಸಂಸ್ಥೆಗಳು / ನಿಯೋಜಕರು ಅನುವು ಮಾಡಿ ಕೊಡಬೇಕಾಗಿರುತ್ತದೆ. ಆದ್ದರಿಂದ ಚುನಾವಣೆಯ ನಡೆಯುವ ಕ್ಷೇತ್ರಗಳಲ್ಲಿ ಮತ ಚಲಾಯಿಸುವ ಅರ್ಹ ಕಾರ್ಮಿಕರು ಮತದಾನ ಚಲಾಯಿಸಲು ಅನುಕೂಲವಾಗುವಂತೆ ಎಲ್ಲಾ ಕಾರ್ಖಾನೆಗಳು, ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು ಮತ್ತು ಇತರೆ ಸಂಸ್ಥೆಗಳ ಮಾಲೀಕರು ವೇತನ ಸಹಿತ ರಜೆ ನೀಡುವಂತೆ ಈ ಮೂಲಕ ಆದೇಶಿಸಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಸಂಸ್ಥೆ/ನಿಯೋಜಕರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದೆಂದು ಈ ಮೂಲಕ ಸೂಚಿಸಿದೆ.

ಆಯುಕ್ತರು
ಕಾರ್ಮಿಕ ಇಲಾಖೆ.